**ದಿನಾಂಕ: 18–12–2021 ರಂದು ಸಮಯ 10.30 ಗಂಟೆಗೆ ವಾರ್ಡ್ 154–ಬಸವನಗುಡಿ ವಾರ್ಡಿಗೆ ಸಂಬಂಧಿಸಿದಂತೆ ವಿವಿದ್ದೋದ್ದೇಶ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

## <u>ಹಾಜರಿದ್ದವರು</u>

1. ಶ್ರೀ. ಮಂಜುನಾಥ ರೆಡ್ಡಿ, ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕ್ಷರು ವಾರ್ಡ್ 154
2. ಶ್ರೀ. ಗಿರೀಶ , ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ 154 ಹಾಗೂ ಸದಸ್ಯ ಕಾರ್ಯದರ್ಶಿ
3. ಶ್ರೀ. ಹೇಮಂತ್ ಕುಮಾರ್. ಕೆ.ಹೆಚ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 154
4. ಶ್ರೀ. ರಮೇಶ್ ಅರಿಸಿಕೆರಿ, Water Inspector, ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್–154
5. ಶ್ರೀ.ಸದಾನಂದ, ಪೋಲೀಸ್ ಬಸವನಗುಡಿ ಸಂಚಾರಿ ಠಾಣೆ
6. ಶ್ರೀ. ಮುನಿರಾಜು ಕೆ., ಕಿರಿಯ ಅಭಿಯಂತರರು, BESCOM ವಾರ್ಡ್ 154
7. ಶ್ರೀ. ಎನ್. ನಾರಾಯಣ, ಕಂದಾಯ ಪರಿವೀಕ್ಷಕರು, ವಾರ್ಡ್ 154
8. ಶ್ರೀ. ಗೋಪಾಲಕೃಷ್ಣ, ಕಂದಾಯ ವಸೂಲಿಗಾರರು ವಾರ್ಡ್ 154

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ಅಧಿಕಾರಿಗಳಿಗೆ ಸ್ವಾಗತವನ್ನು ಕೋರುತ್ತಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಅಧ್ಯಕ್ಷರಾದ ಶ್ರೀ ಮಂಜುನಾಥ ರೆಡ್ಡಿ ರವರು ಪ್ರತಿ ತಿಂಗಳ ಮೊದಲನೇ/ಮೂರನೇ ಶನಿವಾರ ನಡೆಸಬೇಕೆಂದು ತಿಳಿಸುತ್ತ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿರುವ ಬರುವ ರಸ್ತೆ ಗುಂಡಿಗಳನ್ನು ಶೀಘ್ರವಾಗಿ ಮುಚ್ಚಲು ಕ್ರಮ ಕೈಗೊಳ್ಳುವುದು ಹಾಗೂ 14ನೇ ಹಣಕಾಸಿನ ಅನುದಾನದಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು ಶೀಘ್ರವಾಗಿ ಸಲ್ಲಿಸಿ ಕೆಲಸ ಪ್ರಾರಂಭಿಸಲು ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

**ಕ್ರಮ:– ಸಹಾಯಕ ಅಭಿಯಂತರರು, ವಾರ್ಡ್ 154**

ನೋಡಲ್ ಅಧಿಕಾರಿಗಳು ಮಾತನಾಡಿ ಸ್ವಚ್ಛ ಸರ್ವೇಕ್ಷಣ್ ನಡೆಯುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಬ್ಲಾಕ್ ಸ್ಪಾಟ್‌ನಲ್ಲಿ ಕಸ ಹಾಕದಂತೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಡೆಬ್ರಿಸ್‌ಗಳನ್ನು ತೆಗೆಯಲು ಕ್ರಮವಹಿಸಲು ಸೂಚಿಸಲಾಗಿದೆ.

**ಕ್ರಮ: – ಕಿರಿಯ ಅಭಿಯಂತರರು ವಾರ್ಡ್–154, ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ಈ.ಎ.ಟಿ ಸ್ಟ್ರೀಟ್ ರಸ್ತೆಯಲ್ಲಿ ಫುಟ್‌ಪಾತ್ ವ್ಯಾಪಾರಿಗಳು ಪಾದಚಾರಿ ಮಾರ್ಗವನ್ನು ಅನಧಿಕೃತವಾಗಿ ಅತಿಕ್ರಮಿಸಿದ್ದು ಇದನ್ನು ಸರಿಪಡಿಸಲು ಸಭೆಯಲ್ಲಿ ಉಪಸ್ಥಿತರಿದ್ದ ಸಾರ್ವಜನಿಕರು ಕೋರಿದರು.

**ಕ್ರಮ: – ಸಹಾಯಕ ಅಭಿಯಂತರರು/ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

>>>>2

ಅಶೋಕನಗರ 6ನೇ ಅಡ್ಡ ರಸ್ತೆಯಲ್ಲಿ ರಾಜ್‌ಕುಮಾರ್ ಪುತಳಿಯ ಎದುರು ರಸ್ತೆ ಗುಂಡಿ ಆಗಿದ್ದು ಸದರಿ ಗುಂಡಿಯನ್ನು ಮುಚ್ಚಲು ಕ್ರಮವಹಿಸಲು ನೋಡಲ್ ಅಧಿಕಾರಿಯವರು ಸೂಚಿಸಿದರು.

**ಕ್ರಮ: - ಸಹಾಯಕ ಅಭಿಯಂತರರು**
**ವಾರ್ಡ್-154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

2ನೇ ಮುಖ್ಯ ರಸ್ತೆ ಕೊಟಕ ಮಹಿಂದ್ರಾ ಬ್ಯಾಂಕ್ ಎದುರು ರಸ್ತೆ ಬದಿ ಚರಂಡಿ ಮೇಲಿರುವ ಚಪ್ಪಡಿ ಕಲ್ಲು ಮುರಿದುಹೋಗಿರಿತ್ತದೆ ಇದನ್ನು ಸರಿಪಡಿಸಲು ಕ್ರಮ ವಹಿಸಲು ನೋಡಲ್ ಅಧಿಕಾರಿಯವರು ಸೂಚಿಸಿದರು.

**ಕ್ರಮ: - ಕ್ರಮ: - ಸಹಾಯಕ ಅಭಿಯಂತರರು**
**ವಾರ್ಡ್-154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

6ನೇ ಅಡ್ಡ ರಸ್ತೆ ಕನ್ಸರ್‌ವೆನ್‌ಸಿ ರಸ್ತೆಯಲ್ಲಿ ಅಲ್ಲಲ್ಲಿ ಸಾರ್ವಜನೀಕರು ಡೆಬ್ರಿಸ್ ಹಾಕಿದ್ದು ಇದನ್ನು ತೆರವು ಗೊಳಿಸಲು ಕ್ರಮ ವಹಿಸಲು ನೋಡಲ್ ಅಧಿಕಾರಿಯವರು ಸೂಚಿಸಿದರು.

**ಕ್ರಮ: - ಸಹಾಯಕ ಅಭಿಯಂತರರು**
**ವಾರ್ಡ್-154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

18/12

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ 154-ಬಸವನಗುಡಿ

AE154

<u>ಪ್ರತಿಯನ್ನು:</u>

1) ಮಾನ್ಯ ಮುಖ್ಯ ಆಯುಕ್ತರು ರವರ ಆಪ್ತ ಶಾಖೆಗೆ ಅವಗಾಹನೆಗೆ ತರಲು ಕಳುಹಿಸಿದೆ.
2) ವಲಯ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
3) ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
4) ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
5) ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
6) ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
7) ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಕಾನೂನು ಸುವ್ಯವಸ್ಥೆ ಪೋಲೀಸ್ ಠಾಣೆ ರವರ ಅವಗಾಹನೆಗೆ.
8) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
9) ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
10) ಕಛೇರಿ ಕಡತಕ್ಕೆ.